ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಜಲಾನಯನ ಅಭಿವೃದ್ಧಿ ಇಲಾಖೆಯ ಯೋಜನೆಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

179 (20) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಕೃಷಿ ಇಲಾಖೆಯಲ್ಲಿ ಬರುವ ಜಲಾನಯನ ಅಭಿವೃದ್ಧಿ ಇಲಾಖೆಯು ಜಾರಿಗೊಳಿಸುತ್ತಿರುವ ಯೋಜನೆಗಳು ಯಾವುವು; ಈ ಯೋಜನೆಗಳಡಿ ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಗೆ ನಿಗಧಿಪಡಿಸಿದ ಅನುದಾನವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಈ ಯೋಜನೆಗಳಡಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಅನುದಾನದಲ್ಲಿ ಕೇಂದ್ರ ಹಾಗೂ ರಾಜ್ಯದ ಪಾಲು ಎಷ್ಟು; ಇದರಲ್ಲಿ ಕೇಂದ್ರ ಹಾಗೂ ರಾಜ್ಯದ ಪ್ರಮಾಣದಲ್ಲಿ ವ್ಯತ್ಯಾಸವೆಷ್ಟು; ಕೇಂದ್ರ ಸರ್ಕಾರದ ಪಾಲಿನ ಪ್ರಮಾಣ ಕಡಿಮೆಯಾಗಿದ್ದಲ್ಲಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಅನುದಾನವನ್ನು ಯಾವ ರೀತಿ ಸರಿದೂಗಿಸಲಾಗಿದೆ ; ಇದರಿಂದ ರಾಜ್ಯ ಸರ್ಕಾರಕ್ಕೆ ಆದ ನಷ್ಟವೆಷ್ಟು? (ಮಾಹಿತಿ ನೀಡುವುದು)